# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2270

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 26-03-2021

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ರೈತರ ಸಂಪೂರ್ಣ ಮಾಹಿತಿಗಳನ್ನೊಳಗೊಂಡ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ವಿತರಣೆಯಲ್ಲಿನ ವ್ಯತ್ಯಯದ ವರದಿಯನ್ನು ಸರ್ಕಾರ ಗಮನಿಸಿದೆಯೇ; | ಯಾವುದೇ ವ್ಯತ್ಯಯ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>"ಸ್ವಾಭಿಮಾನಿ ರೈತ" ಗುರುತಿನ ಚೀಟಿಯನ್ನು ಕೊಪ್ಪಳ ಜಿಲ್ಲೆಯಲ್ಲಿ ಮಾತ್ರ ವಿತರಿಸಲಾಗಿದೆ. |
| ಆ. | ಸ್ವಾಭಿಮಾನಿ ರೈತ ಗುರುತಿನ ಚೀಟಿ ಪಡೆಯಲು ಇರುವ ಮಾನದಂಡಗಳಾವುವು; (ಮಾಹಿತಿ ನೀಡುವುದು) | • FRUITS (Farmer Registration and Unified beneficiary InformaTion System) ತಂತ್ರಾಂಶದಲ್ಲಿ ನೋಂದಣಿಯಾಗಿರಬೇಕು.<br>• ನೋಂದಣಿ ಮಾಡಲು ರೈತರು ಪಹಣಿ, ಆಧಾರ್, ಬ್ಯಾಂಕ್ ಖಾತೆ ವಿವರ ಹೊಂದಿರಬೇಕು.<br>• ರೈತರು ನೋಂದಣಿಯನ್ನು ಕೃಷಿ/ತೋಟಗಾರಿಕೆ/ರೇಷ್ಮೆ/ಪಶುಸಂಗೋಪನೆ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಗಳಲ್ಲಿ ಮಾಡಿಸಬಹುದು. |
| ಇ. | ಈವರೆಗೆ ರಾಜ್ಯದಲ್ಲಿ ಎಷ್ಟು ರೈತರಿಗೆ "ಸ್ವಾಭಿಮಾನಿ ರೈತ" ಗುರುತಿನ ಚೀಟಿ ವಿತರಿಸಲಾಗಿದೆ; | "ಸ್ವಾಭಿಮಾನಿ ರೈತ' ಗುರುತಿನ ಚೀಟಿಯನ್ನು ಕೊಪ್ಪಳ ಜಿಲ್ಲೆಯಲ್ಲಿ ಮಾತ್ರ ಒಟ್ಟು 18903 ರೈತರಿಗೆ ವಿತರಿಸಲಾಗಿದೆ. |
| ಈ. | ಸದರಿ ಯೋಜನೆಗೆ ನಿಗದಿಪಡಿಸಿರುವ ಅನುದಾನದ ಮಾಹಿತಿ ನೀಡುವುದು; | ಕೊಪ್ಪಳ ಜಿಲ್ಲಾಡಳಿತದಿಂದ ಜಿಲ್ಲಾ ಖನಿಜ ಪ್ರತಿಷ್ಠಾನದಿಂದ ರೂ.72.00 ಲಕ್ಷಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದೆ. |
| ಉ) | ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ರೈತರಿಗೆ ಸ್ವಾಭಿಮಾನಿ ರೈತರ ಗುರುತಿನ ಚೀಟಿ ನೀಡಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು) | ಬೆಳಗಾವಿ ಜಿಲ್ಲೆಯಲ್ಲಿ ಈವರೆಗೆ ಯಾವುದೇ ಸ್ವಾಭಿಮಾನಿ ರೈತರ ಗುರುತಿನ ಚೀಟಿ ನೀಡಿರುವುದಿಲ್ಲ. |

**ಸಂಖ್ಯೆ: AGRI-AML/103/2021**

(ಬಿ.ಸಿ. ಪಾಟೀಲ್)
ಕೃಷಿ ಸಚಿವರು